**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ ಇವರು ಕೇರಳ ರಾಜ್ಯದಲ್ಲಿರುವ ಪ್ರಸಿದ್ಧ ತೀರ್ಥಕ್ಷೇತ್ರವಾದ ಶಬರಿಮಲೆ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನಕ್ಕೆ ಕರ್ನಾಟಕ ರಾಜ್ಯದಿಂದ ಯಾತ್ರೆಗೆ ಹೋಗುವ ಭಕ್ತಾದಿಗಳಿಗೆ ಸೂಕ್ತ ಸಾರಿಗೆ ವ್ಯವಸ್ಥೆ, ಆರೋಗ್ಯ ಚಿಕಿತ್ಸಾ ವ್ಯವಸ್ಥೆ ಮತ್ತು ವಿಶ್ರಾಂತಿ ಹಾಗೂ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಮಾನ್ಯ ಸರ್ಕಾರವು ಕೇರಳ ಸರ್ಕಾರದ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವ ಕುರಿತು ನಿಯಮ 330 ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಹೇಳಿಕೆ.**

*********

<u>ಉತ್ತರ</u> :-

2010ನೇ ಜನವರಿಯಲ್ಲಿ ನಡೆದ ಭೂ ಕುಸಿತ, ಭಕ್ತಾದಿಗಳ ನೂಕು-ನುಗ್ಗಲಿನಿಂದ ಅನೇಕ ಭಕ್ತಾದಿಗಳ ಜೀವ ಹಾನಿಗೆ ಕಾರಣವಾಗಿದ್ದು, ಇಂತಹ ಅಪಘಾತ-ಅವಘಡಗಳನ್ನು ತಡೆಗಟ್ಟುವ ಸಲುವಾಗಿ, 2010-11ನೇ ಸಾಲಿನಿಂದ 2017-18ರವರೆಗೆ ಕರ್ನಾಟಕ ರಾಜ್ಯದಿಂದ ಶಬರಿಮಲೈಗೆ ಮಂಡಲ-ಮಕರ ವಿಳಕ್ಕು ದರ್ಶನದ ಪ್ರಯುಕ್ತ ತೆರಳುವ ಭಕ್ತಾದಿಗಳ/ಯಾತ್ರಾರ್ಥಿಗಳಿಗೆ ಕರ್ನಾಟಕ ಸರ್ಕಾರದ ವಾರ್ತಾ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಆರೋಗ್ಯ ಇಲಾಖೆ, ಕಂದಾಯ ಇಲಾಖೆ, ಧಾರ್ಮಿಕ ದತ್ತಿ ಇಲಾಖೆ ಹಾಗೂ ಸಾರಿಗೆ ಇಲಾಖೆಗಳ ಸಹಯೋಗದೊಂದಿಗೆ ಭಕ್ತಾದಿಗಳಿಗೆ ಮಾಹಿತಿ ಕೇಂದ್ರಗಳನ್ನು ತೆರೆಯುವುದಲ್ಲದೆ, ವೈದ್ಯಕೀಯ ಸೇವಾ ಸೌಲಭ್ಯಗಳನ್ನು ಒದಗಿಸಲಾಗಿತ್ತು. ಕೆಲವು ಸೂಚಿತ ಸ್ಥಳಗಳಲ್ಲಿ ಭಕ್ತಾದಿಗಳಿಗೆ ಮಾಹಿತಿಗಳನ್ನು ಒದಗಿಸಲು ಕಂದಾಯ ಮತ್ತು ಇಲಾಖೆಯ ಸಮೂಹ 'ಎ' ಮತ್ತು 'ಬಿ' ದರ್ಜೆಯ ಅಧಿಕಾರಿಗಳನ್ನು ನಿಯೋಜಿಸಲಾಗಿತ್ತು. ಭಕ್ತರ ಅನುಕೂಲಕ್ಕಾಗಿ ಸಹಾಯವಾಣಿ ತೆರೆದು ಅವಶ್ಯ ಸೌಲಭ್ಯಗಳನ್ನು ಕಲ್ಪಿಸಲು ಹಾಗೂ ಇದಕ್ಕೆ ತಗಲುವ ವೆಚ್ಚವನ್ನು ಸಾಮಾನ್ಯ ಸಂಗ್ರಹಣಾ ನಿಧಿಯಿಂದ ಭರಿಸಲಾಗಿರುತ್ತದೆ.

ಕೇರಳ ರಾಜ್ಯದ ಶ್ರೀ ಕ್ಷೇತ್ರ ಶಬರಿಮಲೈಗೆ ತೆರಳುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕರ್ನಾಟಕ ಸರ್ಕಾರವು 2017-18ನೇ ಸಾಲಿನಲ್ಲಿನ ಆಯವ್ಯಯ ಭಾಷಣದ ಘೋಷಣೆ (ಕ್ರ.ಸಂ.360)ಯನ್ವಯ ಲೆಕ್ಕ ಶೀರ್ಷಿಕೆ 4059-80-051-0-52-ಮೂಲಭೂತ ಸೌಕರ್ಯಗಳು ಮತ್ತು ಧಾರ್ಮಿಕ ಚಟುವಟಿಕೆಗಳು ಇದರಡಿಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಕಂಇ 69 ಮುಅಬಿ 2017 ದಿನಾಂಕ:07.06.2017ರಲ್ಲಿ ಶಬರಿಮಲೆಗೆ ಭೇಟಿ ನೀಡುವ ಕರ್ನಾಟಕದ 50 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳ ಅನುಕೂಲಕ್ಕಾಗಿ ವೈದ್ಯಕೀಯ ಸೌಲಭ್ಯಗಳು, ಸಹಾಯವಾಣಿ, ರಕ್ಷಣೆ ಮತ್ತು ನೆರವು ನೀಡಲು ಒಂದು ಉಪ ಕಛೇರಿಯನ್ನು ತೆರೆಯಲು ರೂ.25-00 ಲಕ್ಷಗಳ ಅನುದಾನವನ್ನು ಮುಂಜೂರು ಮಾಡಿ ಬಿಡುಗಡೆ ಮಾಡಲಾಗಿರುತ್ತದೆ.

ಹೊರ ರಾಜ್ಯದಲ್ಲಿರುವ ಶ್ರೀಕ್ಷೇತ್ರ ಶಬರಿಮಲೈಗೆ ತೆರಳುವ ಯಾತರ್ಾರ್ಥಿಗಳ/ಭಕ್ತಾದಿಗಳಿಗೆ ಸೂಕ್ತ ಸಾರಿಗೆ ವ್ಯವಸ್ಥೆ, ಆರೋಗ್ಯ ಚಿಕಿತ್ಸಾ ವ್ಯವಸ್ಥೆ ಮತ್ತು ವಿಶ್ರಾಂತಿ ಹಾಗೂ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವುದು ವಿವಿಧ ಇಲಾಖೆಗಳ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಕರ್ನಾಟಕ ರಾಜ್ಯದಿಂದ ಹೊರಡುವ ಯಾತ್ರಾರ್ಥಿಗಳಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನಿಗಮದ ವತಿಯಿಂದ ವಿಶೇಷ ಬಸ್ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.

ಶ್ರೀ ಅಯ್ಯಪ್ಪ ಸ್ವಾಮಿ ದೇವಾಲಯದ ಹತ್ತಿರ ಭಕ್ತಾದಿಗಳಿಗೆ ಅನುಕೂಲವಾಗಲೆಂದು ಚೌಲ್ಟ್ರಿಯನ್ನು ನಿರ್ಮಿಸಲು ಜಮೀನನ್ನು ಗುರುತಿಸುವ ಕಾರ್ಯ ಚಾಲ್ತಿಯಲ್ಲಿದ್ದು, ಕೇರಳ ಸರ್ಕಾರದೊಂದಿಗೆ ವ್ಯವಹರಿಸಲಾಗುತ್ತಿದೆ. .

(ಸಂಖ್ಯೆ:ಕಂಇ 190 ಮುಸಪ್ರ 2024)

(ರಾಮಲಿಂಗಾರೆಡ್ಡಿ)
**ಸಾರಿಗೆ ಮತ್ತು ಮುಜರಾಯಿ ಸಚಿವರು**